**All India Radio: Bangalore**
**Regional Bulletin In Kannada**
**02.08.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**02.08.2025 / 6.40 p.m.**

**<><><><>**

ಮುಖ್ಯಾಂಶಗಳು

- ಬೆಂಗಳೂರಿನಲ್ಲಿ ನವೆಂಬರ್ ೬ ರಿಂದ ಮೂರು ದಿನಗಳ ಕಾಲ ೭ನೇ ಆವೃತ್ತಿಯ ಭಾರತ ಉತ್ಪಾದನಾ ಪ್ರದರ್ಶನ
- ಲೈಂಗಿಕ ದೌರ್ಜನ್ಯ ಪ್ರಕರಣ; ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಜೀವಾವಧಿ ಶಿಕ್ಷೆ
- ಆಲಮಟ್ಟಿ ಅಣೆಕಟ್ಟು ಎತ್ತರಿಸುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಮಹಾರಾಷ್ಟ್ರದಿಂದ ವಿರೋಧ ಸರಿಯಲ್ಲ - ಸಂಸದ ಬಸವರಾಜ ಬೊಮ್ಮಾಯಿ
- ಅಕ್ಟೋಬರ್ ೨೮ ರಿಂದ ಮಂಗಳೂರಿನಲ್ಲಿ ಅಂತಾರಾಷ್ಟ್ರೀಯ ಬ್ಯಾಡ್ಮಿಂಟನ್ ಪಂದ್ಯಾವಳಿ

><><><><><><><><><><><

ಆತ್ಮ ನಿರ್ಭರ ಭಾರತ, ವಿಕಸಿತ ಭಾರತ ಮತ್ತು ಮೇಕ್ ಇನ್ ಇಂಡಿಯಾ ಕಾರ್ಯಕ್ರಮಗಳ ಅಡಿಯಲ್ಲಿ ನಿಗದಿಪಡಿಸಿದ ಗುರಿಗಳಿಂದಾಗಿ ಆಪರೇಷನ್ ಸಿಂದೂರ್‌ನಲ್ಲಿ ಗೆಲುವು ಸಾಧಿಸಲಾಗಿದೆ ಎಂದು ಕೇಂದ್ರ ರಕ್ಷಣಾ ರಾಜ್ಯ ಸಚಿವ ಸಂಜಯ್ ಸೇಠ್ ಒತ್ತಿ ಹೇಳಿದ್ದಾರೆ. ಬೆಂಗಳೂರಿನಲ್ಲಿ ಇಂದು ನಡೆದ ಭಾರತ ಉತ್ಪಾದನಾ ಪ್ರದರ್ಶನದ ಪೂರ್ವಭಾವಿ ತಯಾರಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ದೇಶೀಕರಣದ ಪ್ರಯತ್ನಗಳು ಮತ್ತು ೧೪೦ ಕೋಟಿ ಭಾರತೀಯರು ತೋರಿಸಿದ ಒಗ್ಗಟ್ಟು, ಆಪರೇಷನ್ ಸಿಂದೂರ್ ಸಮಯದಲ್ಲಿ ಪಾಕಿಸ್ತಾನಕ್ಕೆ ಸೂಕ್ತ ಉತ್ತರವನ್ನು ನೀಡುವುದನ್ನು ಖಚಿತಪಡಿಸಿದೆ ಎಂದರು. ಕೇಂದ್ರ ಸರ್ಕಾರದ ನೀತಿಗಳಿಂದಾಗಿ ಸಶಸ್ತ್ರ ಪಡೆಗಳ ಮೂರು ವಿಭಾಗಗಳು ಸಹ ಆತ್ಮನಿರ್ಭರತೆಯನ್ನು ಗಳಿಸುತ್ತಿವೆ ಎಂದು ಸಚಿವ ಸಂಜಯ್ ಸೇಠ್ ಹೇಳಿದರು.

ಧ್ವನಿ: ಸಚಿವ ಸಂಜಯ್ ಸೇಠ್ ( ೩೦ ಸೆಕೆಂಡುಗಳು)

ಭಾರತ ಉತ್ಪಾದನಾ ಪ್ರದರ್ಶನದ ೭ನೇ ಆವೃತ್ತಿ 'ಬಾಹ್ಯಾಕಾಶ ಮತ್ತು ರಕ್ಷಣಾ ಎಂಜಿನಿಯರಿಂಗ್' ಪ್ರದರ್ಶನವನ್ನು ಲಘು ಉದ್ಯೋಗ ಭಾರತಿ-ಕರ್ನಾಟಕವು ಐಎಂಎಸ್ ಫೌಂಡೇಶನ್ ಸಹಯೋಗದೊಂದಿಗೆ ಇದೇ ನವೆಂಬರ್ ೬, ೭ ಮತ್ತು ೮ ರಂದು ಬೆಂಗಳೂರು ಅಂತಾರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ಆಯೋಜಿಸುತ್ತಿದೆ.

><><><><><><><><><><><><><

ಮನೆಗೆಲಸದ ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಜನಪ್ರತಿನಿಧಿಗಳ ನಾಯ್ಯಾಲಯ ಜೀವಾವಧಿ ಶಿಕ್ಷೆ ಹಾಗೂ ೧೦ ಲಕ್ಷ ರೂಪಾಯಿ ದಂಡ ವಿಧಿಸಿದೆ.೪೭ ವರ್ಷದ ಮಹಿಳೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ದೋಷಿ ಎಂದು ನ್ಯಾಯಾಧೀಶರಾದ ಸಂತೋಷ್ ಗಜನಾನ್ ಭಟ್ ಅವರಿದ್ದ ನ್ಯಾಯಪೀಠ ನಿನ್ನೆ ಘೋಷಿಸಿತ್ತು. ಇಂದು ಶಿಕ್ಷೆ ಪ್ರಮಾಣವನ್ನು ನ್ಯಾಯಪೀಠ ಪ್ರಕಟಿಸಿದೆ. ಪ್ರಜ್ವಲ್ ರೇವಣ್ಣ ವಿರುದ್ಧ ಇನ್ನು ಮೂರು ಲೈಂಗಿಕ ದೌರ್ಜನ್ಯ ಪ್ರಕರಣಗಳು ಬಾಕಿ ಇವೆ.

><><><><><><><><><><><><><

ಆಲಮಟ್ಟಿ ಅಣೆಕಟ್ಟು ಎತ್ತರಿಸುವ ರಾಜ್ಯ ಸರ್ಕಾರದ ನಿರ್ಧಾರವನ್ನು ವಿರೋಧಿಸಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ವಿರೋಧ ವ್ಯಕ್ತಪಡಿಸಿರುವುದು ಸಮಂಜಸವಲ್ಲ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಣೆಕಟ್ಟು ಎತ್ತರಿಸುವುದರಿಂದ ಮಹಾರಾಷ್ಟ್ರದ ಕೊಲ್ಹಾಪುರ, ಸಾಂಗ್ಲಿ ಮತ್ತಿತರ ಜಿಲ್ಲೆಗಳಲ್ಲಿ ಪ್ರವಾಹ ಪರಿಸ್ಥಿತಿ ತಲೆದೋರಲಿದೆ ಎಂದು ಹೇಳುತ್ತಿದ್ದಾರೆ. ಈ ಹಿಂದೆಯೇ ವಿಸ್ತೃತ ತಾಂತ್ರಿಕ ಅಧ್ಯಯನ ನಡೆಸಲಾಗಿದ್ದು, ಪ್ರವಾಹಕ್ಕೆ ಜಲಾಶಯ ಕಾರಣ ಆಗಲ್ಲ ಎಂಬ ತೀರ್ಮಾನಕ್ಕೆ ಬರಲಾಗಿದೆ. ಪಡ್ನವೀಸ್ ಆರೋಪ ನಿರಾಧಾರ. ಆಲಮಟ್ಟಿ ಅಣೆಕಟ್ಟು ಕಟ್ಟಿದ ೧೯೬೯ ರ ಮುನ್ನಾವೇ ಮಹಾರಾಷ್ಟ್ರದಲ್ಲಿ ಪ್ರವಾಹ ಸಂಭವಿಸುತಿತ್ತು ಎಂದರು.

><><><><><><><><><><><><><><

ಇತ್ತೀಚೆಗೆ ಭಾರತ ಮತ್ತು ಬ್ರಿಟನ್ ಐತಿಹಾಸಿಕ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಿದವು. ಈ ಒಪ್ಪಂದದಿಂದಾಗಿ ಭಾರತದ ಜವಳಿ, ಪಾದರಕ್ಷೆಗಳು, ರತ್ನಗಳು, ಆಭರಣಗಳು, ಸಮುದ್ರ ಆಹಾರ,

ಸಂಸ್ಕರಿಸಿದ ಆಹಾರ, ಎಲೆಕ್ಟ್ರಾನಿಕ್ಸ್, ಫಾರ್ಮ ಮತ್ತು ಎಂಜಿನಿಯರಿಂಗ್ ವಸ್ತುಗಳು ಬ್ರಿಟನ್‌ನಲ್ಲಿ ಉತ್ತಮ ಮಾರುಕಟ್ಟೆ ಪ್ರವೇಶವನ್ನು ಪಡೆಯುತ್ತದೆ.ಉಭಯ ದೇಶಗಳ ನಡುವಿನ ಮುಕ್ತ ವ್ಯಾಪಾರ ಒಪ್ಪಂದದ ಕುರಿತು ಲಘು ಉದ್ಯೋಗ ಭಾರತಿ-ಕರ್ನಾಟಕದ ಅಧ್ಯಕ್ಷರಾದ ನಾರಾಯಣ ಪ್ರಸನ್ನ ಆಕಾಶವಾಣಿಯೊಂದಿಗೆ ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದಾರೆ.

**ಧ್ವನಿ : ನಾರಾಯಣ ಪ್ರಸನ್ನ**

><><><><><><><><><><><

ಕೋಲಾರ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್, ಕೆನರಾ ಬ್ಯಾಂಕ್ ಹಾಗೂ ಆರ್ಥಿಕ ಸಾಕ್ಷರತಾ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಕೋಲಾರ ತಾಲೂಕಿನ ಅರಹಳ್ಳಿ ಗ್ರಾಮ ಪಂಚಾಯಿತಿಯ ಸೀಪುರ ಗ್ರಾಮದಲ್ಲಿ ಕೇಂದ್ರ ಸರ್ಕಾರದ ಭದ್ರತಾ ಯೋಜನೆಗಳ ಜನಸುರಕ್ಷಾ ಅಭಿಯಾನ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್‌ನ ಆರ್ಥಿಕ ಸಾಕ್ಷರತಾ ಸಲಹೆಗಾರರಾದ ವಿಶಾಲಾಕ್ಷಿ ಮಾತನಾಡಿ, ಪ್ರಧಾನಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆಯಡಿ ೧೮ ರಿಂದ ೫೦ ವರ್ಷದ ವ್ಯಕ್ತಿಗಳು ಅರ್ಹರಾಗಿದ್ದು, ಆರೋಗ್ಯಕ್ಕೆ ಸಂಬಂಧಪಟ್ಟಂತೆ ಸ್ವಾಭಾವಿಕವಾಗಿ ಮರಣ ಹೊಂದಿದರೆ, ೨ ಲಕ್ಷ ರೂಪಾಯಿ ಪರಿಹಾರ ಸಿಗುತ್ತದೆ. ವರ್ಷಕ್ಕೆ ೪೩೬ ರೂಪಾಯಿಗಳನ್ನು ಪಾವತಿಸಬೇಕಾಗುತ್ತದೆ ಎಂದು ಮಾಹಿತಿ ನೀಡಿದರು.

**ಧ್ವನಿ- ವಿಶಾಲಾಕ್ಷಿ, ಆರ್ಥಿಕ ಸಾಕ್ಷರತಾ ಸಲಹೆಗಾರರು ( ೩೦ ಸೆಕೆಂಡುಗಳು)**

><><><><><><><><><><><><

ಬ್ಯಾಡ್ಮಿಂಟನ್ ಅಸೋಸಿಯೇಶನ್ ನೇತೃತ್ವದಲ್ಲಿ, ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಶನ್ ಹಾಗೂ ದಕ್ಷಿಣ ಕನ್ನಡ ಬ್ಯಾಡ್ಮಿಂಟನ್ ಅಸೋಸಿಯೇಶನ್ ಸಹಭಾಗಿತ್ವದಲ್ಲಿ ವಿಶ್ವ ದರ್ಜೆಯ ಬ್ಯಾಡ್ಮಿಂಟನ್ ಪಂದ್ಯಾವಳಿಯ ಇದೇ ಮೊದಲ ಬಾರಿಗೆ ಅಕ್ಟೋಬರ್ ೨೮ರಿಂದ ನವೆಂಬರ್ ೨ರವರೆಗೆ ಮಂಗಳೂರಿನಲ್ಲಿ ಆಯೋಜಿಸಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಬ್ಯಾಡ್ಮಿಂಟನ್ ಅಸೋಸಿಯೇಶನ್ ಅಧ್ಯಕ್ಷ ಸಂತೋಷ್ ಕುಮಾರ್ ಶೆಟ್ಟಿ ತಿಳಿಸಿದ್ದಾರೆ. ದೇಶ-ವಿದೇಶದ ನೂರಾರು ಬ್ಯಾಡ್ಮಿಂಟನ್ ಕ್ರೀಡಾಪಟುಗಳು ಭಾಗವಹಿಸಲಿರುವ ಈ ಬ್ಯಾಡ್ಮಿಂಟನ್ ಪಂದ್ಯಾವಳಿ 'ಮಂಗಳೂರು ಇಂಡಿಯಾ ಇಂಟರ್‌ನ್ಯಾಷನಲ್ ಚಾಲೆಂಜ್ ೨೦೨೫' ಹೆಸರಿನಲ್ಲಿ ನಡೆಯಲಿದೆ. ದೇಶ-ವಿದೇಶದ ೩೫೦ಕ್ಕೂ ಅಧಿಕ ಬ್ಯಾಡ್ಮಿಂಟನ್ ಕ್ರೀಡಾಪಟುಗಳು ಪಂದ್ಯಾವಳಿಯಲ್ಲಿ

ಭಾಗವಹಿಸಲಿದ್ದಾರೆ. ಬಹುಮಾನ ಮೊತ್ತ ಸುಮಾರು ೨೫ ಲಕ್ಷ ರೂಪಾಯಿ ಇರಲಿದೆ ಎಂದು ಅವರು ಮಾಹಿತಿ ನೀಡಿದರು.

><><><><><><><><><><><

ಪ್ರಧಾನಿ ನರೇಂದ್ರ ಮೋದಿಯವರು ವಾರಾಣಸಿಯಲ್ಲಿಂದು ಪಿಎಂ ಕಿಸಾನ್ ಸಮ್ಮಾನ್ ಯೋಜನೆಯ ೨೦ನೇ ಕಂತಿನ ಹಣ ಬಿಡುಗಡೆ ಮಾಡಿದ್ದಾರೆ. ೯ ಕೋಟಿ ರೈತರಿಗೆ ಸುಮಾರು ೨೦ ಸಾವಿರ ಕೋಟಿ ರೂಪಾಯಿ ಹಣ ಬಿಡುಗಡೆಯಾಗಿದೆ. ಈ ಪೈಕಿ ಹಾವೇರಿ ಜಿಲ್ಲೆಯ ೧ ಲಕ್ಷ ೫೯ ಸಾವಿರ ರೈತರಿಗೆ ೩೦ ಕೋಟಿ ೯ ಲಕ್ಷ ರೂಪಾಯಿ ಹಾಗೂ ಗದಗ ಜಿಲ್ಲೆಯ ೧ ಲಕ್ಷ ೯ ಸಾವಿರ ರೈತರಿಗೆ ೨೩ ಕೋಟಿ ರೂಪಾಯಿ ಬಿಡುಗಡೆಯಾಗಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.ಹಾವೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಮುದ್ರಾ ಯೋಜನೆ ಮತ್ತು ಪಿಎಂ ಕಿಸಾನ್ ಸಮ್ಮಾನ್ ಯೋಜನೆಯಿಂದ ಕರ್ನಾಟಕದಲ್ಲಿ ದೊಡ್ಡ ಪ್ರಮಾಣದ ಅನುಕೂಲವಾಗಿದೆ. ಪಿಎಂ ಕಿಸಾನ್ ಸಮ್ಮಾನ್ ಯೋಜನೆಯ ಹಣ ಬಿಡುಗಡೆಯಿಂದ ರೈತರು ಸಕಾಲದಲ್ಲಿ  ಕೃಷಿ ಚಟುವಟಿಕೆ ಕೈಗೊಳ್ಳಲು ಸಹಕಾರಿಯಾಗಿದೆ ಎಂದರು.ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ನೇರ ಪ್ರಸಾರ ಕಾರ್ಯಕ್ರಮ ಆಯೋಜಿಸಲಾಗಿತ್ತು.

><><><><><><><><><><><

ಕೊಡಗಿನ ವಿಶಿಷ್ಟ ಆತಿಥ್ಯ, ಸಂಸ್ಕೃತಿಗಳನ್ನು ತಿಳಿಯಲು ಅವಕಾಶ ಒದಗಿಸುವ 'ಹೋಂ ಸ್ಟೇ'ಗಳು ಸ್ಥಳೀಯ ಆರ್ಥಿಕತೆಗೂ ಸಹಕಾರಿಯಾಗಿದೆ. ಜಿಲ್ಲೆಯಲ್ಲಿ ಮಾತ್ರ ಕಂಡುಬರುವ 'ಐನ್ ಮನೆ' ಸಂಸ್ಕೃತಿಯನ್ನು ಜತನದಿಂದ ಕಾಯ್ದುಕೊಳ್ಳುವ ಮೂಲಕ ಕೊಡಗನ್ನು ಮೂಲ ಸ್ವರೂಪದಲ್ಲಿಯೇ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಪ್ರತಿಯೊಬ್ಬರು ಕಾಳಜಿ ವಹಿಸಬೇಕು ಎಂದು ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಯದುವೀರ್ ಒಡೆಯರ್ ಹೇಳಿದ್ದಾರೆ.ಕೊಡಗು ಪತ್ರಕರ್ತರ ಸಂಘದ ವತಿಯಿಂದ ಮಡಿಕೇರಿಯಲ್ಲಿಂದು  ಜಿಲ್ಲೆಯ ವಿವಿಧ ಸಂಘ-ಸಂಸ್ಥೆಗಳೊಂದಿಗೆ ಆಯೋಜಿತವಾಗಿದ್ದ 'ಕೊಡಗು ವಿಷನ್' ಸಂವಾದ ಕಾರ್ಯಕ್ರಮವನ್ನು ಉದ್ಘಾಟಿಸಿ, ಸಮಸ್ಯೆಗಳನ್ನು ಆಲಿಸಿ, ಬೇಡಿಕೆಗಳ ಮನವಿ ಸ್ವೀಕರಿಸಿ ಅವರು ಮಾತನಾಡಿದರು.

><><><><><><><><><><><

ಕೆ.ಆರ್.ಎಸ್ ಜಲಾಶಯ ಭರ್ತಿಯಾಗಿದ್ದು, ಮೊದಲು ಜಿಲ್ಲೆಯ ಕೊನೆಯ ಭಾಗದ ಕೆರೆಗಳಿಗೆ ನೀರು ತುಂಬಿಸಿ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಮಂಡ್ಯ ನಗರದ ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಇಂದು ನಡೆದ ಕೆ.ಡಿ.ಪಿ. ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಲಮುರಿ ಭಾಗದಲ್ಲಿ ತೆಪ್ಪ ನಡೆಸುತ್ತಿದ್ದು, ಪರವಾನಗಿ ಪಡೆದು ನಡೆಸಬೇಕು. ಮಳೆ ಹೆಚ್ಚಾದ ಸಂದರ್ಭದಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ತೆಪ್ಪ ನಡೆಸುವುದನ್ನು ನಿಲ್ಲಿಸಬೇಕು. ಈ ಬಗ್ಗೆ ಹೆಚ್ಚಿನ ನಿಗಾ ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿದರು. ಮಂಡ್ಯ ಜಿಲ್ಲೆಯಲ್ಲಿ ೩೧ ಸಾವಿರದ ೮೯೯ ಹೆಕ್ಟೇರ್ ಪರಿಗಣಿತ ಅರಣ್ಯ ಪ್ರದೇಶವಿದ್ದು, ಈ ಪ್ರದೇಶವನ್ನು ಕಂದಾಯ ಹಾಗೂ ಅರಣ್ಯ ಇಲಾಖೆಯಿಂದ ಒಂದೂವರೆ ತಿಂಗಳಲ್ಲಿ ಸಮೀಕ್ಷೆ ನಡೆಸಿ, ನ್ಯಾಯಾಲಯಕ್ಕೆ ವರದಿ ನೀಡಬೇಕಾಗಿದೆ. ನಿಖರವಾಗಿ ಸಮೀಕ್ಷೆ ನಡೆಸಿ ವರದಿ ನೀಡುವಂತೆ ಸಚಿವರು ಸೂಚಿಸಿದರು.

><><><><><><><><><><><><><><><><><